Akashvani : Bangalore
National Bulletin In Kannada
24.07.2024 / 7.35 am
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

**<><*<><>*><>**

<u>ಮುಖ್ಯಾಂಶಗಳು</u>

೧. ವಿಕಸಿತ ಭಾರತ ಸಾಕಾರಕ್ಕೆ ೨೦೨೪-೨೫ನೇ ಸಾಲಿನ ಬಜೆಟ್ ಮಂಡಿಸಿದ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್

೨. ನೀಟ್ ಯುಜಿ ಮರು ಪರೀಕ್ಷೆ ಕೋರಿ ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ರಿಟ್ ಅರ್ಜಿ ವಜಾಗೊಳಿಸಿದ ಸುಪ್ರೀಂ ಕೋರ್ಟ್

೩. ಇಥಿಯೋಪಿಯಾದಲ್ಲಿ ಭೂಕುಸಿತ; ಮೃತಪಟ್ಟವರ ಸಂಖ್ಯೆ ೨೨೯ಕ್ಕೆ ಏರಿಕೆ

೪. ಏಷ್ಯಾ ಕಪ್ ಟಿ-೨೦ ಮಹಿಳಾ ಕ್ರಿಕೆಟ್: ನೇಪಾಳ ವಿರುದ್ಧ ಭಾರತಕ್ಕೆ ೮೨ ರನ್‌ಗಳ ಭರ್ಜರಿ ಜಯ

**<><*<><>*><>**

'ವಿಕಸಿತ ಭಾರತ' ಸಂಕಲ್ಪದ ಅನ್ವಯ ೨೦೨೪-೨೫ನೇ ಸಾಲಿನ ಪೂರ್ಣಪ್ರಮಾಣದ ಮುಂಗಡಪತ್ರವನ್ನು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಲೋಕಸಭೆಯಲ್ಲಿ ನಿನ್ನೆ ಮಂಡಿಸಿದರು. ಬೆಳಗ್ಗೆ ಕಲಾಪ ಸಮಾವೇಶವಾಗುತ್ತಿದ್ದಂತೆಯೇ ಹಣಕಾಸು ಸಚಿವರಿಗೆ ಆಯ-ವ್ಯಯ ಮಂಡನೆ ಮಾಡುವಂತೆ ಲೋಕಸಭಾಧ್ಯಕ್ಷ ಓಂ ಬಿರ್ಲಾ ಸೂಚಿಸಿದರು. ನಿರ್ಮಲಾ ಸೀತಾರಾಮನ್, ಕೇಂದ್ರ ಸರ್ಕಾರದ ಧ್ಯೇಯೋದ್ದೇಶ ಹಾಗೂ ನಾಲ್ಕು ವಲಯದ ಅಭಿವೃದ್ಧಿಪಥ ಹೊಂದುವ ೯ ಅಂಶಗಳ ಯೋಜನೆಯನ್ನು ಸುಮಾರು ೩ ಗಂಟೆ ೫೦ ನಿಮಿಷಗಳ ಕಾಲ ಸತತವಾಗಿ ಭಾಷಣ ಓದಿ, ಉದ್ದೇಶವನ್ನು ಸದನದ ಮುಂದಿಟ್ಟರು. ಉದ್ಯೋಗ, ಕೌಶಲ್ಯಾಭಿವೃದ್ಧಿ, ಸಣ್ಣ ಅತೀ ಸಣ್ಣ ಉದ್ದಿಮೆದಾರರಿಗೆ ಮತ್ತು ಮಧ್ಯಮ ವರ್ಗದವರ ಅನುಕೂಲಕ್ಕೆ ತಕ್ಕಂತೆ ಯೋಜನೆಗಳ ಪ್ರಸ್ತಾವನೆಯನ್ನು ಸದನದ ಮುಂದೆ ಪ್ರಸ್ತಾಪಿಸಿದರು. ರೈತ ಸಮುದಾಯದ ಆದಾಯ ಹೆಚ್ಚಿಸುವ ಹಾಗೂ ಆರ್ಥಿಕ ಸಂಪನ್ಮೂಲ ದ್ವಿಗುಣಗೊಳಿಸುವ ಯೋಜನೆಗಳನ್ನು ಪ್ರಕಟಿಸಿದರು. ರಾಷ್ಟ್ರೀಯ ಸಹಕಾರ ನೀತಿ ಎಲ್ಲ ವಲಯದಲ್ಲಿಯೂ ಸಹಕಾರ ಬಲವರ್ಧನೆ ಮೂಲಕ ದೇಶದ ಆರ್ಥಿಕ ಬೆಳವಣಿಗೆಗೆ ಪೂರಕವಾದ ಕಾರ್ಯಕ್ರಮಗಳನ್ನು ಸದನದ ಮುಂದೆ ಪ್ರಸ್ತಾಪಿಸಿದರು. ತೈಲ ಬೀಜ ಉತ್ಪಾದನೆ, ಸಾಸಿವೆ, ಕಡಲೆಕಾಯಿ, ಸೋಯಾ, ಸೂರ್ಯಕಾಂತಿ ಬೆಳೆ ಬೆಳೆಯಲು ರೈತ ಸಮುದಾಯಕ್ಕೆ ಪ್ರೋತ್ಸಾಹ ನೀಡುವ ಕಾರ್ಯಕ್ರಮ ಘೋಷಿಸಿದರು.

ತರಕಾರಿ, ಉತ್ಪಾದನೆ, ಸರಬರಾಜು ಮಾಡಲು ಕಾರ್ಯಕ್ರಮ ಪ್ರಕಟಿಸಿದ ಅವರು, ಹೆಚ್ಚು ಉತ್ಪಾದನೆ ಮಾಡುವ ೧೦೯ ಹೊಸ ತಳಿಗಳನ್ನು ತೋಟಗಾರಿಕೆಯಲ್ಲಿ ಅಳವಡಿಸಿ, ಪ್ರೋತ್ಸಹಿಸಲು ಹಾಗೂ ೩೨ ವಿಧದ ತೋಟಗಾರಿಕಾ ಬೆಳೆಗಳ ಆಧುನಿಕ ಬೆಳೆ ಬೆಳೆಯಲು ರೈತ ಸಮುದಾಯಕ್ಕೆ ಸಲಹೆ ಮಾರ್ಗದರ್ಶನ ನೀಡಲು, ಸಂಶೋಧನೆಗೆ ಹಾಗೂ ಅಭಿವೃದ್ಧಿಗೆ ಒತ್ತು ನೀಡುವುದಾಗಿ ಕೇಂದ್ರ ಹಣಕಾಸು ಸಚಿವರು ತಮ್ಮ ಆಯ-ವ್ಯಯ ಭಾಷಣದಲ್ಲಿ ಉಲ್ಲೇಖಿಸಿದರು. ಮಾನವ ಸಂಪನ್ಮೂಲ ಮತ್ತು ಸಾಮಾಜಿಕ ನ್ಯಾಯದ ಜೊತೆಗೆ ಇಂಧನ ಭದ್ರತೆ, ನಗರಗಳ ಅಭಿವೃದ್ಧಿ, ಮೂಲಸೌಕರ್ಯ, ಅನ್ವೇಷಣೆ, ಸಂಶೋಧನೆಗೆ ಕೇಂದ್ರ ಸರ್ಕಾರ ಮತ್ತಷ್ಟು ಒತ್ತು ನೀಡಲಿದೆ ಎಂದು ಸದನಕ್ಕೆ ಮಾಹಿತಿ ನೀಡಿದರು. ಮೂರು ಹೊಸ ಕಾರ್ಯಕ್ರಮಗಳನ್ನು ಪ್ರಕಟಿಸಿದ ಹಣಕಾಸು ಸಚಿವರು, ಮೂಲಸೌಕರ್ಯ ಅಭಿವೃದ್ಧಿಗೆ ೧೧ ಲಕ್ಷ ಕೋಟಿ ರೂಪಾಯಿ ಮೀಸಲು., ಮಹಿಳಾ ಮತ್ತು ಮಕ್ಕಳ ಸಂರಕ್ಷಣೆಗೆ ೩ ಲಕ್ಷ ಕೋಟಿ ರೂಪಾಯಿ ಹಣವನ್ನು ಮೀಸಲಿಡುವುದರ ಜೊತೆಗೆ, ದುಡಿಯುವ ಯುವಕರಿಗೆ ಪ್ರೋತ್ಸಾಹ ನೀಡುವ ಯೋಜನೆಯನ್ನು ಸಚಿವೆ ನಿರ್ಮಲಾ ಸೀತಾರಾಮನ್ ಪ್ರಕಟಿಸಿದರು. ಮುದ್ರಾ ಸಾಲ ಮಿತಿಯನ್ನು ೧೦ ಲಕ್ಷದಿಂದ ೨೦ ಲಕ್ಷದವರಿಗೆ ಹೆಚ್ಚಿಸಲು ಉದ್ದೇಶಿಸಲಾಗಿದೆ. ಸ್ವ-ಉದ್ಯೋಗ ಕಾರ್ಯಕ್ರಮಕ್ಕೆ ನೆರವಿನ ಪ್ರಮಾಣ ಏರಿಕೆ ಮಾಡಲಾಗಿದೆ ಎಂದು ಅವರು ತಿಳಿಸಿದರು.

ಮುಂದಿನ ಐದು ವರ್ಷಗಳಲ್ಲಿ ಇ-ವಾಣಿಜ್ಯ ವಹಿವಾಟು, ಖಾಸಗಿ, ಸಾರ್ವಜನಿಕ ಸಹ ಭಾಗಿತ್ವ-ಪಿಪಿಪಿ ಯೋಜನೆಯಡಿ ಕೈಗೆತ್ತಿಕೊಳ್ಳಲು ಉದ್ದೇಶಿಸಲಾಗಿದೆ. ಇದರಿಂದ ೧ ಕೋಟಿಗೂ ಹೆಚ್ಚು ಉದ್ಯೋಗ ಸೃಷ್ಟಿಯಾಗಲಿವೆ ಎಂದು ಅವರು ತಿಳಿಸಿದರು. ದೇಶೀಯವಾಗಿ ಖನಿಜ ಉತ್ಪಾದನಾ ವಲಯದಲ್ಲಿ ಹಾಗೂ ಪುನರ್‌ಬಳಕೆ ಖನಿಜ ವಲಯದಲ್ಲಿ ಹಲವು ಕಾರ್ಯಕ್ರಮಗಳನ್ನು ಪ್ರಕಟಿಸಿದ ಅವರು, ೧೪ ಪ್ರಮುಖ ನಗರಗಳಲ್ಲಿ ಸುಸ್ಥಿರ ಅಭಿವೃದ್ಧಿ ಕಾರ್ಯಕ್ರಮ ಕೈಗೆತ್ತಿಕೊಳ್ಳಲಾಗುವುದು ಎಂದರು. ಪ್ರಧಾನಮಂತ್ರಿ ಆವಾಸ್ ಯೋಜನೆಯಡಿ ೧ ಕೋಟಿ ಕಡು ಬಡವರು ಹಾಗೂ ಮಧ್ಯಮ ವರ್ಗದವರಿಗೆ ಮನೆ ನಿರ್ಮಾಣ ಮಾಡಿಕೊಳ್ಳಲು ೧೦ ಲಕ್ಷ ಕೋಟಿ ರೂಪಾಯಿ ಹಣವನ್ನು ನಾಲ್ಕು ಹಂತದಲ್ಲಿ ಜಾರಿಗೆ ತರಲಾಗುವುದು ಎಂದರು. ದೇಶದ ಆರ್ಥಿಕ ಬೆಳವಣಿಗೆ ೬.೪ ರಷ್ಟು ಇರಲಿದ್ದು, ಸುಸ್ಥಿರ ಬೆಳವಣಿಗೆಗೆ ಹಾಗೂ ಹೂಡಿಕೆಗೆ ೧.೨೫ ಲಕ್ಷ ಕೋಟಿ ರೂಪಾಯಿ ಮೀಸಲಿರಿಸಲಾಗಿದೆ ಎಂದು ಅವರು ಮಾಹಿತಿ ನೀಡಿದರು. ಆದಾಯ ತೆರಿಗೆ ಪಾವತಿಸುವವರಿಗೆ ಸ್ಟ್ಯಾಂಡರ್ಡ್ ಡಿಡಕ್ಷನ್ ಮಿತಿಯನ್ನು ೭೫ ಸಾವಿರ ರೂಪಾಯಿಗೆ ಹೆಚ್ಚಿಸಲಾಗಿದೆ. ೩ ಲಕ್ಷ ರೂಪಾಯಿ ವರೆಗೆ ವಾರ್ಷಿಕ ಆದಾಯ ತೆರಿಗೆ ವಿನಾಯಿತಿ. ಮೂರರಿಂದ ಏಳು ಲಕ್ಷ ರೂಪಾಯಿವರೆಗೆ ಶೇಕಡ ೫ ರಷ್ಟು ಹಾಗೂ ೭ ರಿಂದ ೧೦ ಲಕ್ಷದವರಿಗೆ ಶೇಕಡ ೧೦ ರಷ್ಟು, ೧೦ ರಿಂದ ೧೨ ಲಕ್ಷದವರಿಗೆ ಶೇಕಡ ೧೫ ಹಾಗೂ ೧೨ ರಿಂದ ೧೫ ಲಕ್ಷದ ವರೆಗೆ ಶೇಕಡ ೨೦ ರಷ್ಟು ಮತ್ತು ೧೫ ಲಕ್ಷ ಮೇಲ್ಪಟವರಿಗೆ ಶೇಕಡ ೩೦ ರಷ್ಟು ತೆರಿಗೆ ಪಾವತಿಸಬೇಕು ಎಂದು ಸದನದಲ್ಲಿ ಪ್ರಸ್ತಾವ ಮಂಡಿಸಿದರು. ಇದಕ್ಕೂ ಮುನ್ನ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್, ಬಜೆಟ್ ಪ್ರತಿಯನ್ನು ರಾಷ್ಟ್ರಪತಿಯವರ ಮುಂದೆ ಪ್ರಸ್ತಾಪಿಸಿದರು. ಅದಕ್ಕೂ ಮುನ್ನ ಸಂಪುಟ ಸಭೆಯಲ್ಲಿ ಇದಕ್ಕೆ ಅನುಮೋದನೆ ದೊರೆಯಿತು. ಕಾರ್ಮಿಕರ ಭವಿಷ್ಯ ನಿಧಿ ಮೇಲಿನ ಬಡ್ಡಿ ದರ ಮುಂದುವರಿದಿದೆ. ೧ ಸಾವಿರಕ್ಕೂ ಹೆಚ್ಚು ಕೈಗಾರಿಕಾ ತರಬೇತಿ ಸಂಸ್ಥೆಗಳನ್ನು ಮೇಲ್ದರ್ಜೆಗೇರಿಸಲಾಗುವುದು. ೨೦ ಲಕ್ಷಕ್ಕೂ ಹೆಚ್ಚು ಯುವಕರಿಗೆ ಮುಂದಿನ ಐದು ವರ್ಷಗಳಲ್ಲಿ ಕೌಶಲ್ಯ ತರಬೇತಿ ನೀಡಲು ಉದ್ದೇಶಿಸಲಾಗಿದೆ.

ವಿದ್ಯಾರ್ಥಿಗಳ ಉನ್ನತ ವ್ಯಾಸಂಗಕ್ಕೆ ನೀಡುತ್ತಿರುವ ನೆರವಿನ ಮೊತ್ತವನ್ನು ಹೆಚ್ಚಿಸಲಾಗಿದ್ದು, ಸುಮಾರು ೨೫ ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳು ಇದರ ಪ್ರಯೋಜನ ಪಡೆಯಲಿದ್ದಾರೆ ಎಂದು ನಿರ್ಮಲಾ ಸೀತಾರಾಮನ್ ಹೇಳಿದರು.

<><*<><>*><>

ಪ್ರಶ್ನೆಪತ್ರಿಕೆ ಸೋರಿಕೆಗೆ ಸಂಬಂಧಿಸಿದಂತೆ ದೇಶಾದ್ಯಂತ ಏಕಕಾಲಕ್ಕೆ ನಡೆದ ನೀಟ್ ಯುಜಿ ಪರೀಕ್ಷೆಯನ್ನು ಪುನಃ ನಡೆಸಬೇಕು ಎಂಬ ಸಾರ್ವಜನಿಕ ಹಿತಾಸಕ್ತಿ ರಿಟ್ ಅರ್ಜಿಯನ್ನು ಸುಪ್ರೀಂ ಕೋರ್ಟ್ ವಜಾ ಮಾಡಿದೆ. ಪ್ರಶ್ನೆಪತ್ರಿಕೆ ಸೋರಿಕೆಯಾಗಿರುವ ಬಗ್ಗೆ ಯಾವುದೇ ದಾಖಲೆಗಳು ಇಲ್ಲ. ದೇಶಾದ್ಯಂತ ೨೩ ಲಕ್ಷಕ್ಕೂ ಹೆಚ್ಚು ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದರು. ಪರೀಕ್ಷೆಯಿಂದ ದೊಡ್ಡ ಪ್ರಮಾಣದಲ್ಲಿ ವಿದ್ಯಾರ್ಥಿಗಳಿಗೆ ತೊಂದರೆಯಾಗಿರುವ ಅಂಶ ಎಲ್ಲಿಯೂ ನಮೂದಾಗಿಲ್ಲ. ಹಾಗಾಗಿ ಮರು ಪರೀಕ್ಷೆ ಇಲ್ಲ ಎಂದು ಸುಪ್ರೀಂ ಕೋರ್ಟ್‌ನ ತ್ರಿಸದಸ್ಯ ಪೀಠ ತೀರ್ಪು ನೀಡಿದೆ. ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಮೂರ್ತಿ ಡಿ.ವೈ.ಚಂದ್ರಚೂಡ್ ನೇತೃತ್ವದ ತ್ರಿಸದಸ್ಯ ಪೀಠ ಈ ತೀರ್ಪು ಪ್ರಕಟಿಸಿತು.

<><*<><>*><>

ನೀಟ್ ಕುರಿತು ಸುಪ್ರೀಂ ಕೋರ್ಟ್ ತೀರ್ಪನ್ನು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಸ್ವಾಗತಿಸಿದ್ದಾರೆ. ಅಂತಿಮವಾಗಿ ಸತ್ಯಕ್ಕೆ ಜಯ ಸಿಕ್ಕಿದೆ ಎಂದು ಅವರು ಹೇಳಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಧರ್ಮೇಂದ್ರ ಪ್ರಧಾನ್, ನರೇಂದ್ರ ಮೋದಿ ಸರ್ಕಾರವು ಪಾರದರ್ಶಕ ಮತ್ತು ಸೋರಿಕೆ ರಹಿತ ಪರೀಕ್ಷಾ ವ್ಯವಸ್ಥೆಗೆ ಬದ್ಧವಾಗಿದೆ. ರಾಷ್ಟ್ರೀಯ ಪರೀಕ್ಷಾ ಸಂಸ್ಥೆ-ಎನ್‌ಟಿಎ ಅನ್ನು ದೋಷ ಮುಕ್ತ ಸಂಸ್ಥೆಯನ್ನಾಗಿ ಮಾಡಲು ಸರ್ಕಾರ ಬದ್ಧವಾಗಿದೆ ಎಂದು ಹೇಳಿದ್ದಾರೆ. ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆ ಪ್ರಕರಣದಲ್ಲಿ ಭಾಗಿಯಾದವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು. ರಾಷ್ಟ್ರೀಯ ಪರೀಕ್ಷಾ ಸಂಸ್ಥೆಯ ಸಂಪೂರ್ಣ ಪುನಶ್ಚೇತನಕ್ಕಾಗಿ ಉನ್ನತ ಮಟ್ಟದ ಸಮಿತಿ ರಚಿಸಲಾಗಿದೆ. ಸಮಿತಿಯು ತಜ್ಞರ ಅಭಿಪ್ರಾಯಗಳನ್ನು ಸಂಗ್ರಹಿಸಿದೆ ಮತ್ತು ವಿವಿಧ ಮಾದರಿಗಳನ್ನು ಅಧ್ಯಯನ ಮಾಡಿದೆ ಎಂದು ಅವರು ತಿಳಿಸಿದ್ದಾರೆ. ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರು ಭಾರತೀಯ ಶಿಕ್ಷಣ ವ್ಯವಸ್ಥೆಯ ಬಗ್ಗೆ ಅಪಪ್ರಚಾರ ಮಾಡುವ ಮೂಲಕ ದೇಶದ ಜನರನ್ನು ದಾರಿ ತಪ್ಪಿಸಲು ಪ್ರಯತ್ನಿಸುತ್ತಿದ್ದಾರೆ. ನೀಟ್ ವಿಚಾರದಲ್ಲಿ ಅವರು ಅಶಾಂತಿ ಮತ್ತು ಅರಾಜಕತೆಯನ್ನು ಸೃಷ್ಟಿಸಲು ಪ್ರಯತ್ನಿಸುತ್ತಿದ್ದಾರೆ ಎಂದು ಆರೋಪಿಸಿದ್ದಾರೆ. ಪ್ರತಿಪಕ್ಷಗಳು ವಿದ್ಯಾರ್ಥಿಗಳ ಕ್ಷಮೆಯಾಚಿಸಬೇಕು ಎಂದು ಧರ್ಮೇಂದ್ರ ಪ್ರಧಾನ್ ಆಗ್ರಹಿಸಿದ್ದಾರೆ.

<><*<><>*><>

ಜಮ್ಮು ಮತ್ತು ಕಾಶ್ಮೀರದಲ್ಲಿರುವ ಪವಿತ್ರ ಅಮರನಾಥ ಗುಹಾ ದೇಗುಲಕ್ಕೆ ೨ ಸಾವಿರದ ೯೦೭ ಯಾತ್ರಾರ್ಥಿಗಳ ಮತ್ತೊಂದು ತಂಡವು ಜಮ್ಮುವಿನ ಭಗವತಿ ನಗರ ಯಾತ್ರಿ ನಿವಾಸದ ಮೂಲ ಶಿಬಿರದಿಂದ ಕಾಶ್ಮೀರ ಕಣಿವೆಗೆ ಇಂದು ತೀರ್ಥಯಾತ್ರೆ ಆರಂಭಿಸಿದೆ. ೧೦೩ ವಾಹನಗಳ ಅಶ್ವದಳದಲ್ಲಿ ಯಾತ್ರಾರ್ಥಿಗಳು ಮೂಲ ಶಿಬಿರದಿಂದ ಇಂದು ಮುಂಜಾನೆ ಹೊರಟರು. ಯಾತ್ರಾರ್ಥಿಗಳಲ್ಲಿ ೨ ಸಾವಿರದ ೧೯೪ ಪುರುಷರು, ೫೯೮ ಮಹಿಳೆಯರು, ೧೧ ಮಕ್ಕಳು, ೯೧ ಸಾಧುಗಳು ಮತ್ತು ೧೩ ಸಾಧ್ವಿಯರು ಸೇರಿದ್ದಾರೆ.

ಈ ಪೈಕಿ ೧ ಸಾವಿರದ ೧೩೪ ಯಾತ್ರಾರ್ಥಿಗಳು ಬಾಲ್ಟಾಲ್ ಬೇಸ್ ಕ್ಯಾಂಪ್‌ಗೆ ಮತ್ತು ೧ ಸಾವಿರದ ೭೭೩ ಯಾತ್ರಿಕರು ಪೆಹಲ್ಗಾಮ್ ಬೇಸ್ ಕ್ಯಾಂಪ್‌ಗೆ ತೆರಳಿದ್ದು, ಅಲ್ಲಿಂದ ಅಮರನಾಥ ದೇಗುಲಕ್ಕೆ ಪ್ರಯಾಣ ಮುಂದುವರಿಸಲಿದ್ದಾರೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

<><*<><>*><>

ಇಥಿಯೋಪಿಯಾದಲ್ಲಿ ಭಾರೀ ಮಳೆಯಿಂದಾಗಿ ಉಂಟಾದ ಭೂಕುಸಿತದಿಂದಾಗಿ ಮೃತಪಟ್ಟವರ ಸಂಖ್ಯೆ ೨೨೯ಕ್ಕೆ ಏರಿದೆ. ದಕ್ಷಿಣ ಇಥಿಯೋಪಿಯಾದ ಕೆಂಚೊ ಶಾಚಾ ಗೊಜ್ಜಿ ಜಿಲ್ಲೆಯಲ್ಲಿ ತೀವ್ರ ಮಳೆಯಿಂದಾಗಿ ಭಾನುವಾರ ಮಧ್ಯರಾತ್ರಿ ಮಣ್ಣು ಕುಸಿತ ಉಂಟಾಗಿತ್ತು. ಮಣ್ಣಿನಡಿ ಸಿಲುಕಿರುವವರ ರಕ್ಷಣೆಗಾಗಿ ಸೋಮವಾರ ವಿಪತ್ತು ನಿರ್ವಹಣಾ ಪಡೆಯ ಸಿಬ್ಬಂದಿ ಧಾವಿಸಿದರು. ಸತತ ಕಾರ್ಯಾಚರಣೆ ನಡೆಸಿ, ಅನೇಕರನ್ನು ರಕ್ಷಿಸಲಾಗಿದ್ದು, ಮಣ್ಣಿನಡಿ ಸಿಲುಕಿದ ಮೃತದೇಹಗಳನ್ನು ಹೊರಕ್ಕೆ ತರಲಾಯಿತು. ಭೂಕುಸಿತದಿಂದ ೧೪೮ ಪುರುಷರು, ೮೧ ಮಹಿಳೆಯರು ಸೇರಿದಂತೆ ಒಟ್ಟು ೨೨೯ ಮಂದಿ ಮೃತಪಟ್ಟಿದ್ದಾರೆ. ಇದರಲ್ಲಿ ವಿಪತ್ತು ನಿರ್ವಹಣೆ ಕಾರ್ಯಪಡೆಯ ಸಿಬ್ಬಂದಿ ಕೂಡ ಸೇರಿದ್ದಾರೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

<><*<><>*><>

ಏಷ್ಯಾ ಕಪ್ ಟಿ-೨೦ ಮಹಿಳಾ ಕ್ರಿಕೆಟ್ ಪಂದ್ಯಾವಳಿಯಲ್ಲಿ ಶ್ರೀಲಂಕಾದ ದಂಬೂಲ್ಲಾ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ನಿನ್ನೆ ನಡೆದ 'ಎ' ಗುಂಪಿನ ಪಂದ್ಯದಲ್ಲಿ ನೇಪಾಳ ವಿರುದ್ಧ ಭಾರತ ೮೨ ರನ್‌ಗಳ ಭರ್ಜರಿ ಜಯ ಸಾಧಿಸಿದೆ. ಟಾಸ್ ಗೆದ್ದು, ಮೊದಲು ಬ್ಯಾಟಿಂಗ್ ಮಾಡಿದ ಭಾರತ ತಂಡ, ನಿಗದಿತ ೨೦ ಓವರ್‌ಗಳಲ್ಲಿ ೩ ವಿಕೆಟ್ ನಷ್ಟಕ್ಕೆ ೧೭೮ ರನ್ ಗಳಿಸಿತು. ೧೭೯ ರನ್‌ಗಳ ಗೆಲುವಿನ ಗುರಿ ಬೆನ್ನಟ್ಟಿದ ನೇಪಾಳ ತಂಡ, ೨೦ ಓವರ್‌ಗಳಲ್ಲಿ ೯ ವಿಕೆಟ್ ನಷ್ಟಕ್ಕೆ ೯೬ ರನ್ ಗಳಿಸಲಷ್ಟೇ ಶಕ್ತವಾಯಿತು. ೪೮ ಬಾಲ್‌ಗಳಲ್ಲಿ ೮೧ ರನ್ ಸಿಡಿಸಿದ ಭಾರತದ ಶಫಾಲಿ ವರ್ಮಾ, ಪಂದ್ಯ ಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.

<><*<><>*><>

ಭಾರತೀಯ ರಕ್ಷಣಾ ಪಡೆಗಳ ಮುಖ್ಯಸ್ಥ ಜನರಲ್ ಅನಿಲ್ ಚೌಹಾಣ್ ಅವರು ಇಸ್ರೇಲ್ ರಕ್ಷಣಾ ಸಚಿವಾಲಯದ ಪ್ರಧಾನ ಮಹಾನಿರ್ದೇಶಕ ಇಯಾಲ್ ಜಮೀರ್ ಅವರೊಂದಿಗೆ ಉಭಯ ದೇಶಗಳ ನಡುವಿನ ಕಾರ್ಯತಂತ್ರದ ಪಾಲುದಾರಿಕೆಯನ್ನು ಹೆಚ್ಚಿಸುವ ಕುರಿತು ಚರ್ಚೆ ನಡೆಸಿದರು. ಮಾತುಕತೆ ವೇಳೆ, ಪ್ರಾದೇಶಿಕ ಶಾಂತಿ ಮತ್ತು ಸ್ಥಿರತೆಯನ್ನು ಹೆಚ್ಚಿಸುವ ಪರಸ್ಪರ ಬದ್ಧತೆಯನ್ನು ಉಭಯರು ಒತ್ತಿ ಹೇಳಿದರು.

<><*<><>*><>

ಮುಂದಿನ ಎರಡು ದಿನಗಳಲ್ಲಿ ಗುಜರಾತ್, ಕೊಂಕಣ, ಗೋವಾ ಮತ್ತು ಮಹಾರಾಷ್ಟ್ರದ ಹಲವೆಡೆ ಧಾರಾಕಾರ ಮಳೆಯಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

**<><*<>** ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು **<>*><>**

**<><*<>** ನಮ್ಮ ಮುಂದಿನ ವಾರ್ತಾ ಪ್ರಸಾರ ಅಪರಾಹ್ನ ೧.೧೦ ಕ್ಕೆ **<>*><>**